## ಕರ್ನಾಟಕವಿಧಾನಪರಿಷತ್ತು

### ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ

**ವಿಷಯ :** ಮಾನ್ಯ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿಸೋಜಾ ರವರು ನಿಯಮ 72ರ ಅಡಿಯಲ್ಲಿ ಗಮನ ಸಳೆಯುವ ಸೂಚನೆಯಲ್ಲಿ"ಸರ್ಕಾರ ಅಡಿಕೆ ಮಂಡಳಿ ರಚನೆ ಮಾಡುವುದಾಗಿ ಸದನದಲ್ಲಿ ಆಶ್ವಾಸನೆ ನೀಡಿದ್ದರೂ ಸಹ ಸದರಿ ಮಂಡಳಿಯನ್ನು ಈವರೆವಿಗೂ ರಚನೆ ಮಾಡದೆ ಇರುವುದರಿಂದ ದೇಶದಲ್ಲಿ ಅತಿ ಹೆಚ್ಚು ಅಡಿಕೆ ಉತ್ಪಾದಿಸುವ ರಾಜ್ಯದ ಅಡಿಕೆ ಬೆಳೆಗಾರರಿಗೆ ಆಗುತ್ತಿರುವ ತೊಂದರೆ ಬಗ್ಗೆ"

**ತೋಟಗಾರಿಕೆಸಚಿವರಉತ್ತರ:**

ಕರ್ನಾಟಕ ರಾಜ್ಯದಲ್ಲಿ ಒಟ್ಟು 2.88 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಯನ್ನು ಬೆಳೆಯಲಾಗುತ್ತಿದೆ. ವಾರ್ಷಿಕ 4.52 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆ ಇರುತ್ತದೆ. ಈ ಬೆಳೆಯನ್ನು ರಾಜ್ಯದ ದಕ್ಷಿಣ ಕನ್ನಡ , ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಚಿತ್ರದುರ್ಗ, ದಾವಣಗೆರೆ, ತುಮಕೂರು, ಮೈಸೂರು, ಚಾಮರಾಜನಗರ ಜಿಲ್ಲೆಗಳಲ್ಲಿ ಪ್ರಮುಖವಾಗಿ ಬೆಳೆಯಾಗುತ್ತಿದೆ.

ಅಡಕೆ ಬೆಳೆಗಾರರ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಅಡಿಕೆ ಬೆಳೆಯನ್ನು ಉತ್ತೇಜಿಸಲು ಕಾಫಿ, ಟೀ, ರಬ್ಬರ್, ಸಾಂಬಾರು ಮತ್ತು ತೆಂಗು ಮಂಡಳಿಗಳ ಮಾದರಿಯಲ್ಲಿ ಅಡಿಕೆ ಮಂಡಳಿಯನ್ನು ಸ್ಥಾಪಿಸುವ ಬಗ್ಗೆ ಉಪ ಕುಲಪತಿಗಳು, ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ವರದಿಯನ್ನು ಸಲ್ಲಿಸಿದ್ದು, ಆ ವರದಿಯಂತೆ ಅಡಿಕೆ ಮಂಡಳಿ ರಚನೆಗೆ ಸಂಬಂಧಿಸಿದಂತೆ ಸಾಧಕ ಭಾಧಕಗಳನ್ನು ಪರಿಶೀಲಿಸಲಾಗುತ್ತಿದೆ.

(ಸಂಖ್ಯೆ: HORTI 190 HGM 2019)

(ವಿ.ಸೋಮಣ್ಣ)
ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು